# ಗರ್ಭಿಣಿ ಮಹಿಳೆಯರು, ಗೃಹರಕ್ಷಕ ದಳ ಸಿಬ್ಬಂದಿಗೆ ಆಹಾರಧಾನ್ಯ ವಿತರಣೆ

ಚಿತ್ರದುರ್ಗ, ಮೇ.02 - ಮಾಧ್ಯಮದವರು, ಪೊಲೀಸ್ ಇಲಾಖೆ ಮೊದಲಾದವರೆಲ್ಲರು ಕಾನೂನಿನ ತಿಳುವಳಿಕೆ, ಸಾಮಾಜಿಕ ಅಂತರದ ಬಗ್ಗೆ ಜನರಿಗೆ ಎಷ್ಟೇ ಹೇಳಿದರು ಅರ್ಥ ಮಾಡಿಕೊಳ್ಳುತ್ತಿಲ್ಲ ಎಂದು ಡಾ. ಶಿವಮೂರ್ತಿ ಮುರುಘಾ ಶರಣರು ಹೇಳಿದರು.

ಇಂದು ಮುರುಘರಾಜೇಂದ್ರ ಮಠದಲ್ಲಿ ಗರ್ಭಿಣಿಯರಿಗೆ, ಗೃಹರಕ್ಷಕದಳ ಸಿಬ್ಬಂದಿ ಮುಂತಾದ 330 ಕುಟುಂಬಗಳಿಗೆ ದವಸ-ಧಾನ್ಯ ವಿತರಣೆ ಮಾಡಿ ಮಾತನಾಡಿದ ಅವರು, ಕೊರೊನಾ ಹಿನ್ನೆಲೆಯಲ್ಲಿ ಹಲವಾರು ಕಡೆ ಸರ್ಕಾರವಾಗಲಿ, ಜನಪ್ರತಿನಿಧಿಗಳಾಗಲಿ, ಸಂಘ-ಸಂಸ್ಥೆಗಳು, ಧಾರ್ಮಿಕ ಕೇಂದ್ರಗಳು ಹಸಿದವರಿಗೆ ಒಂದಿಷ್ಟು ಅನ್ನ ನೀಡುವ ಸಂಸ್ಕøತಿಯನ್ನು ಬೆಳೆಸಿಕೊಂಡು ಬಂದಿರುವುದು ಹಾರ್ದಿಕವಾದ ಬೆಳವಣಿಗೆ. ಅತಿವೃಷ್ಟಿ, ಅನಾವೃಷ್ಟಿ, ಇನ್ನಿತರೆ ರಾಷ್ಟ್ರವನ್ನು ಕಾಡುವ ಯಾವ ಸಮಸ್ಯೆಗಳು ಬಂದರೂ ಮಾನವೀಯತೆಯನ್ನು ಮೆರೆಯುವ ರಾಷ್ಟ್ರವೆಂದರೆ ಭಾರತ. ಆದರೆ ತೆಗೆದುಕೊಳ್ಳಲು ಬಂದ ಜನರು ಸಮಸ್ಯೆಗಳ ಅರಿವಿಲ್ಲದೆ ಗುಂಪುಗೂಡಿ ಕಾನೂನು ಉಲ್ಲಂಘನೆ ಮಾಡಿ ರೋಗ ಮತ್ತೆ ಉಲ್ಬಣವಾಗುವಂತೆ ಮಾಡುತ್ತಿರುವುದು ಅನಾರೋಗ್ಯಕರ ಬೆಳವಣಿಗೆ. ಹೀಗಾಗಿಯೆ ಮತ್ತೆ ಲಾಕ್‍ಡೌನ್ ಮುಂದುವರಿಸಿದ್ದಾರೆ. ಸಾರ್ವಜನಿಕರ ಪ್ರಾಣ ಉಳಿಸಲು ವೈದ್ಯರು, ನರ್ಸ್‍ಗಳು, ಪೊಲೀಸ್ ಇಲಾಖೆ ಮೊದಲಾಗಿ ನಿರಂತರ ಶ್ರಮಿಸುತ್ತಿದ್ದಾರೆ. ಕೆಲವರು ಕೊರೊನಾ ಲಕ್ಷಣಗಳಿದ್ದರೂ ಮುಚ್ಚಿಡುತ್ತಾರೆ. ಇದು ಅತ್ಯಂತ ಅಪಾಯಕಾರಿ ಎಂದರು. ಸ್ವಚ್ಚತೆ ಬಗ್ಗೆ ತಿಳಿಹೇಳಿದರು.

ಗೃಹರಕ್ಷಕದಳದ ಲೋಕೇಶ್, ಸಿಡಿಪಿಓ ಶ್ರೀಮತಿ ಸುಧಾ, ಎಸ್‍ಜೆಎಂ ವಿದ್ಯಾಪೀಠದ ಕಾರ್ಯದರ್ಶಿ ಎ.ಜೆ.ಪರಮಶಿವಯ್ಯ, ಮಲ್ಲಿಕಾರ್ಜುನಯ್ಯ, ಪೈಲ್ವಾನ್ ತಿಪ್ಪೇಸ್ವಾಮಿ ಮೊದಲಾದವರಿದ್ದರು.







